ಆ) ಮಂಗಳೂರು ಮತಕ್ಷೇತ್ರದ ಬಂಟ್ವಾಳ ಮತ್ತು ಮಂಗಳೂರು ತಾಲ್ಲೂಕಿನಲ್ಲಿರುವ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು;

ಇ) ಬಂಟ್ವಾಳ ತಾಲ್ಲೂಕಿನ ಮುಡಿಪು ಹಾಗೂ ಮಂಗಳೂರು ತಾಲ್ಲೂಕಿನಲ್ಲಿ ಹೊಸದಾಗಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಖಾಲಿ ಇರುವ ಎಲ್ಲಾ ವಿಷಯಗಳ ಉಪನ್ಯಾಸಕರ ಹುದ್ದೆಯನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ?

ಶ್ರೀ ವಿ.ಎಸ್. ಆಚಾರ್ಯ. (ಉನ್ನತ ಶಿಕ್ಷಣ ಸಚಿವರು):

ಅ) ಮೈಸೂರು (ಹನಗೋಡು) – 1 ಹಾಸನ (ಹೆತ್ತೂರು)– 1, ಚಿಕ್ಕಮಗಳೂರು (ಯಗಟಿ)– 1. ಉ.ಕ.(ಬಾಡ)– 1, ಕೊಪ್ಪಳ (ಹಿಟ್ನಾಳ ಮತ್ತು ಅಳವಂಡಿ)– 1+1, ಮಂಡ್ಯ (ಮೇಲುಕೋಟೆ) – 1 ಹಾವೇರಿ (ಚಿ. ಬಾಸೂರು)– 1

ಆ) 07.

ಇ) ಹೌದು.

ಈ) ಬಂದಿದೆ.

ಉ) ಉಪನ್ಯಾಸಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೆ.ಪಿ.ಎಸ್.ಸಿ. ಯಿಂದ ಕ್ರಮ ಕೈಗೊಳ್ಳಲಾಗುತ್ತಿದೆ.

ಅನುದಾನಿತ ಶಾಲೆಗಳ ಮಕ್ಕಳಿಗೆ ಸಮವಸ್ತ್ರ ನೀಡುವ ಬಗ್ಗೆ

94 (291): ಶ್ರೀ ಖಾದರ್ ಯು. ಟಿ. (ಮಂಗಳೂರು): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸರ್ಕಾರದ ಅನುದಾನಿತ ಶಾಲಾ ಮಕ್ಕಳಿಗೆ ಸಮವಸ್ತ್ರಗಳನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಇದನ್ನು ಎಂದಿನಿಂದ ಅನುಷ್ಠಾನ ಗೊಳಿಸಲಾಗುವುದು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಹೆಚ್ಚುವರಿ ಶಿಕ್ಷಕರ ವರ್ಗಾವಣೆ

95 (292): ಶ್ರೀ ಖಾದರ್ ಯು.ಟಿ. (ಮಂಗಳೂರು): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 40:1ರ ಅನುಪಾತದಲ್ಲಿ ಹೆಚ್ಚುವರಿ ಶಿಕ್ಷಕರನ್ನು ಸರ್ಕಾರದ ಆದೇಶದ ಮೂಲಕ ವರ್ಗಾವಣೆ ಮಾಡಿದ್ದು, ಶಾಲೆಗಳಲ್ಲಿ ವಿದ್ಯಾರ್ಥಿಗಳ ಪಾಠ ಪ್ರವಚನಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಮಾರಿಕಾಂಬ ದೇವಸ್ಥಾನದ ಬಗ್ಗೆ

96 (301): ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ): ಮಾನ್ಯ ಉನ್ನತ ಶಿಕ್ಷಣ ಯೋಜನೆ, ಸಾಂಖ್ಯಿಕ, ಮುಜರಾಯಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತೀರ್ಥಹಳ್ಳಿ ಪಟ್ಟಣದಲ್ಲಿರುವ ಮಾರಿಕಾಂಬ ದೇವಸ್ಥಾನವು ಮುಜರಾಯಿ ಇಲಾಖೆ ಖಾಸಗಿ ಒಡೆತನಕ್ಕೆ ಅಥವಾ ಸಾರ್ವಜನಿಕರಿಗೆ ಸೇರಿದೆಯೇ (ಮಾಹಿತಿ ನೀಡುವುದು):